ಇ) ಅಂಡರ್‌ಬ್ರಿಡ್ಜ್ ನಿರ್ಮಾಣ ಮಾಡಲು ಸರ್ಕಾರವು ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆಯನ್ನು ನಿರ್ಮಾಣ, ನಿರ್ವಹಣೆ ಹಾಗೂ ಹಸ್ತಾಂತರ (ಬಿಒಟಿ) ಆಧಾರದ ಮೇರೆಗೆ ನಿರ್ಮಿಸುತ್ತಿರುವ ನಂದಿ ಹೈವೆ ಡೆವಲಪರ್ಸ್ ಕಂಪನಿಗೆ ಸೂಚಿಸಿದೆ. ಸದರಿ ಕಾಮಗಾರಿಯು ಮುಕ್ತಾಯದ ಹಂತದಲ್ಲಿದೆ.

ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವುದರ ಬಗ್ಗೆ

1693 (2188) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1999-2000ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಪಶುಸಂಗೋಪನಾ ಆಸ್ಪತ್ರೆಗಳಾಗಿ ಮೇಲ್ದರ್ಜೆಗೆ ಏರಿಸಲಾಗಿದೆ; (ವಿಧಾನ ಸಭಾವಾರು ಮಾಹಿತಿ ಒದಗಿಸುವುದು)

ಆ) ಮೇಲ್ದರ್ಜೆಗೆ ಸೇರಿಸಿದ ಎಲ್ಲಾ ಆಸ್ಪತ್ರೆಗಳು ಕಾರ್ಯನಿರ್ವಹಣೆ ಆರಂಭಿಸಿದೆಯೆ;

ಇ) 2000-2001ನೇ ಸಾಲಿನಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು;

ಈ) ಕುಂದಾಪುರ ವಿಧಾನ ಸಭೆಯ ಯಾವ ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು?

ಶ್ರೀ ಎ.ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ) ಯಾವುದೂ ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಪಟ್ಟಣ ಮತ್ತು ಪುರಸಭೆ ವ್ಯಾಪ್ತಿಯ ರಸ್ತೆಗಳ ಕಾಂಕ್ರೀಟೀಕರಣ

1694 (2189) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1999-2000ನೇ ಸಾಲಿನಲ್ಲಿ ಎಷ್ಟು ಪಟ್ಟಣ ಪ್ರದೇಶಗಳಲ್ಲಿ ಎಷ್ಟು ಪ್ರಮಾಣದ ರಸ್ತೆಗಳನ್ನು ಕಾಂಕ್ರೀಟೀಕರಣಗೊಳಿಸಲಾಗಿದೆ;

ಆ) ಇನ್ನು ಎಷ್ಟು ಪಟ್ಟಣಗಳಲ್ಲಿ ನಗರ ಸಭೆ, ಪುರಸಭೆ ವ್ಯಾಪ್ತಿ ಸೇರಿ ರಸ್ತೆಗಳನ್ನು ಕಾಂಕ್ರೀಟೀಕರಣಗೊಳಿಸಲಾಗುವುದು;

ಇ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭಾ ವ್ಯಾಪ್ತಿಯ ಲೋಕೋಪಯೋಗಿ ಇಲಾಖೆಗೆ ಸೇರಿದ 1.6 ಕಿ.ಮೀ.ಉದ್ದದ ರಸ್ತೆಯನ್ನು ಕಾಂಕ್ರೀಟೀಕರಣಗೊಳಿಸುವ ಉದ್ದೇಶವಿದೆಯೆ; ಇದ್ದಲ್ಲಿ ಯಾವಾಗ ಕಾಂಕ್ರೀಟೀಕರಣಗೊಳಿಸಲಾಗುವುದು?

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು).

ಅ) 1999-2000 ಸಾಲಿನಲ್ಲಿ ನಾಲ್ಕು ಪಟ್ಟಣ ಪ್ರದೇಶದಲ್ಲಿ ಒಟ್ಟು 4064 ಮೀಟರ್ ಉದ್ದದ ರಸ್ತೆಯನ್ನು ಕಾಂಕ್ರೀಟ್ ಮಾಡಲಾಗಿದೆ.

ಆ) ನಗರ ಪರಿಮಿತಿಯಲ್ಲಿ 197 ಮೀಟರ್ ರಸ್ತೆ ಕಾಂಕ್ರೀಟ್ ಮಾಡಲಾಗುವುದು.

ಇ) ಈ ರಸ್ತೆಯನ್ನು ಕಾಂಕ್ರೀಟ್ ಮಾಡಲು ಸಧ್ಯಕ್ಕೆ ಯಾವ ಪ್ರಸ್ತಾವನೆಯೂ ಇರುವುದಿಲ್ಲ.

ಕರಾವಳಿ ಪ್ರದೇಶದಲ್ಲಿ "ಸಿ.ಆರ್.ಝಡ್" ಯೋಜನೆ

1695 (2191) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದ ಕರಾವಳಿ ಪ್ರದೇಶದಲ್ಲಿ 'ಸಿ ಆರ್ ಜಡ್' ಯೋಜನೆ ಜಾರಿಗೆ ತರಲಾಗಿದೆಯೇ, ತಂದಿದ್ದರೆ ಯಾವ ಕಾರಣಕ್ಕಾಗಿ ಇದನ್ನು ಜಾರಿಗೆ ತರಲಾಗಿದೆ, ಇದರ ಸಂಪೂರ್ಣ ಮಾಹಿತಿ ಒದಗಿಸುವುದು;

ಆ) ಸದರಿ ಯೋಜನೆಯ ವ್ಯಾಪ್ತಿಗೆ ಒಳಪಟ್ಟ ಮೀನುಗಾರರ ನಿವೇಶನಗಳಲ್ಲಿ ಕಟ್ಟಡ ಕಟ್ಟಲು ಅನುಮತಿ ಕೊಡಲಾಗುವುದೆ;

ಇ) ಅವಕಾಶವಿಲ್ಲದಿದ್ದಲ್ಲಿ ಬದಲಿ ವ್ಯವಸ್ಥೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಕೆ.ಎಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು).

ಅ) ಹೌದು.ಸಿ. ಆರ್ ಜಡ್ ಪ್ರದೇಶವು ಅತಿ ಸೂಕ್ಷ್ಮವಾದ ಪ್ರದೇಶವಾಗಿದ್ದು ಈ ಪ್ರದೇಶದ ಸಂರಕ್ಷಣೆಗಾಗಿ ಯಾವುದೇ ಒಂದು ಕಾರ್ಯಚಟುವಟಿಕೆಯನ್ನು ಪ್ರಾರಂಭಿಸಬೇಕಾದಲ್ಲಿ ಅದು ಸಿ ಆರ್ ಜಡ್ ಅಧಿಸೂಚನೆಗೆ ಅನುಗುಣವಾಗಿರಬೇಕಾಗಿದೆ.

ಭಾರತ ಸರ್ಕಾರದ ಅರಣ್ಯ ಮತ್ತು ಪರಿಸರ ಮಂತ್ರಾಲಯದವರು ಪರಿಸರ (ಸಂರಕ್ಷಣೆ) ಕಾಯ್ದೆ, 1986 ರ ಅಡಿ ಅಧಿಸೂಚನೆ ಸಂಖ್ಯೆ: ಎಸ್.ಓ.114 (ಇ) ದಿನಾಂಕ:19.2.91 ನ್ನು ಹೊರತಂದಿದೆ. ಈ ಅಧಿಸೂಚನೆಯಂತೆ ಸಮುದ್ರದ ಹೆಚ್ ಟಿ ಎಲ್ ನಿಂದ 500 ಮೀಟರ್ ಭೂಪ್ರದೇಶದ ಕಡೆಗೂ ಹಾಗೂ ನದಿಗಳ ಅಕ್ಕ ಪಕ್ಕದಲ್ಲಿ 100 ಅಥವಾ 150 ಮೀಟರ್ ಪ್ರದೇಶವನ್ನು ನದಿಗಳಲ್ಲಿ ಸಮುದ್ರದ ಉಬ್ಬರ ಪ್ರಭಾವ ತನಕ ಸಿ ಆರ್ ಜಡ್ ಪ್ರದೇಶದಲ್ಲಿ ಬರುವುದೆಂದು ಈಗಾಗಲೇ ಘೋಷಿಸಲಾಗಿದೆ. ಈ ಪ್ರದೇಶವನ್ನು ಸಿ ಆರ್ ಜಡ್-1, ಸಿ ಆರ್ ಜಡ್ -11 ಮತ್ತು ಸಿ ಆರ್ ಜಡ್-111 ಎಂದು ವಿಭಾಗ ಮಾಡಲಾಗಿದೆ, ಅಧಿಸೂಚನೆಯ ಪ್ರಕಾರ ಯಾವುದೇ ಒಂದು ಕಾರ್ಯಚಟುವಟಿಕೆಯನ್ನು ಕೈಗೆತ್ತಿಕೊಳ್ಳಲು ಅಧಿಸೂಚನೆಯಲ್ಲಿರುವ ನಿಯಮಗಳನ್ನು ಅನುಸರಿಸಬೇಕಾಗುವುದು.

ಆ) ಅನುಮತಿ ನೀಡುವುದರ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ನಿರ್ಣಯಿಸಲಾಗುವುದು.

ಇ) ಉದ್ಭವಿಸುವುದಿಲ್ಲ.